**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ.ಹರೀಶ್ ಕುಮಾರ್ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ನೀಡಿರುವ ಗಮನ ಸೆಳೆಯುವ ಸೂಚನೆ ಮೇಲಿನ ಹೇಳಿಕೆ.**

**<u>ಸೂಚನೆ:</u>**

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನ ಅಂಗಡಿ ಪೇಟೆಯ ಮಾರುಕಟ್ಟೆ ಸುತ್ತಮುತ್ತ ತೆರೆದ ಚರಂಡಿ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆ ಮಾಡುವ ಕುರಿತು ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುತ್ತೇನೆ.

**<u>ಹೇಳಿಕೆ:</u>**

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಹಂತ-2 ರಲ್ಲಿ ಪ್ರತಿ ಗ್ರಾಮದಲ್ಲಿ ಘನ ತ್ಯಾಜ್ಯ ನಿರ್ವಹಣೆ ಮತ್ತು ದ್ರವತ್ಯಾಜ್ಯ ನಿರ್ವಹಣೆಗೆ ಅನುದಾನ ಬಳಕೆಗೆ ಅವಕಾಶ ಕಲ್ಪಿಸಲಾಗಿದೆ. ಅದರಂತೆ ದ್ರವತ್ಯಾಜ್ಯ ನಿರ್ವಹಣೆಗೆ ಗ್ರಾಮ ಪಂಚಾಯಿತಿಗಳಲ್ಲಿ ನಿರ್ಮಾಣ ಮತ್ತು ನಿರ್ವಹಣೆ ಮಾಡಬಹುದಾದ ಹಾಗೂ ಸುಲಭ ತಂತ್ರಜ್ಞಾನ ಇರುವಂತಹ ಘಟಕಗಳನ್ನು ನಿರ್ಮಾಣ ಮಾಡಲು ತಿಳಿಸಲಾಗಿದೆ. ಅದರಂತೆ ಗ್ರಾಮೀಣ ಪ್ರದೇಶದಲ್ಲಿ ದಿನನಿತ್ಯ ಉತ್ಪತ್ತಿಯಾಗುತ್ತಿರುವ ಬೂದು ನೀರು ನಿರ್ವಹಣೆಗೆ ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಅಡಿಯಲ್ಲಿ ಸಮುದಾಯ ಹಂತದಲ್ಲಿ ಸಮುದಾಯ ಇಂಗು ಗುಂಡಿ ನಿರ್ಮಾಣ, ಅತಿ ಹೆಚ್ಚು ಬೂದು ನೀರು ಸಂಗ್ರಹವಾಗುವ ಸ್ಥಳಗಲ್ಲಿ ತ್ಯಾಜ್ಯ ನೀರು ಸ್ಥರೀಕರಣ ಹೊಂಡಗಳ ನಿರ್ಮಾಣಕ್ಕೆ ಅವಕಾಶ ಕಲ್ಪಿಸಲಾಗಿದೆ.

ಅದೇ ರೀತಿ ಪ್ರತಿ ಕುಟುಂಬವು ವೈಯಕ್ತಿಕ ಇಂಗು ಗುಂಡಿ ನಿರ್ಮಾಣ ಮಾಡಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಡಯಡಿ ಅವಕಾಶ ಕಲ್ಪಿಸಲಾಗಿದೆ.

ಮೇಲೆ ವಿವರಿಸಿದಂತೆ ಸ್ವಚ್ಛ ಭಾರತ್ ಮಿಷನ್ ಹಂತ-2ರ ಮಾರ್ಗಸೂಚಿಯಡಿ ಗ್ರಾಮೀಣ ಪ್ರದೇಶದಲ್ಲಿ ಭೂಗತ ಚರಂಡಿ ನಿರ್ಮಾಣಕ್ಕೆ ಅನುದಾನದ ಲಭ್ಯತೆ ಇಲ್ಲದೇ ಇರುವುದರಿಂದ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನ ಅಂಗಡಿಯಲ್ಲಿ ತ್ಯಾಜ್ಯ ನೀರು ನಿರ್ವಹಣೆಗೆ ಈಗಾಗಲೇ 109 ವೈಯಕ್ತಿಕ ಇಂಗು ಗುಂಡಿ, 2 ಸಮುದಾಯ ಇಂಗು ಗುಂಡಿಗಳ ನಿರ್ಮಾಣಕ್ಕೆ ವಿಸ್ತೃತಾ ಯೋಜನಾ ವರದಿ ಸಿದ್ಧಪಡಿಸಿ ಅನುಮೋದನೆ ನೀಡಲಾಗಿದ್ದು ಪ್ರಸ್ತುತ 33 ಇಂಗು ಗುಂಡಿ ಕಾಮಗಾರಿಗಳು ಪೂರ್ಣಗೊಂಡಿದ್ದು, ಬಾಕಿ ಕಾಮಗಾರಿಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.

**(ಬಸವರಾಜ ಬೊಮ್ಮಾಯಿ)**
ಮುಖ್ಯ ಮಂತ್ರಿ